ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803

ಅಂತರ್ಜಾಲ: https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

**ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್): ಯು40109ಕೆಎ1999ಎಸ್‌ಜಿಸಿ025521**

**ಕಂಪನಿ ಅಧಿಕೃತ ಕಛೇರಿ:** ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.

**ಓದಿದೆ:** ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ7/5841/92-93 ದಿನಾಂಕ: 18.07.2017.

**ಪ್ರಸ್ತಾವನೆ:** ಕವಿಪ್ರನಿನಿಯು ಮಾತೃ ಸಂಸ್ಥೆಯಾಗಿದ್ದು ಅನೇಕ ನ್ಯಾಯಾಲಯಗಳ ಪ್ರಕರಣಗಳಲ್ಲಿ ವಿದ್ಯುತ್ ವಿತರಣಾ ಕಂಪನಿಗಳು/ಕ್ಷೇತ್ರಾಧಿಕಾರಿಗಳಿಂದ ಮಾಹಿತಿ/ದಾಖಲೆಗಳನ್ನು ನ್ಯಾಯಾಲಯಗಳಿಗೆ ನಿಗಮದ ಪರವಾಗಿ ಪ್ರಕರಣಗಳನ್ನು ಸಮರ್ಥವಾಗಿ ಮಂಡಿಸಲು ಸಲ್ಲಿಸಬೇಕಾಗಿರುತ್ತದೆ. ಅನೇಕ ಪ್ರಕರಣಗಳಲ್ಲಿ ವಿದ್ಯುತ್ ವಿತರಣಾ ಕಂಪನಿಗಳ ಅಧಿಕಾರಿಗಳನ್ನು/ಕೇಂದ್ರ ಕಛೇರಿಗಳ ಅಧಿಕಾರಿಗಳನ್ನು ಸಂಪರ್ಕಿಸಿದಾಗ, ಹಾರಿಕೆ ಉತ್ತರವನ್ನು ನೀಡುವುದು ಮತ್ತು ಬೇಜವಾಬ್ದಾರಿಯಿಂದ ವರ್ತಿಸುವುದಲ್ಲದೇ, ದಾಖಲೆಗಳನ್ನು/ಮಾಹಿತಿಗಳನ್ನು/ಕಂಡಿಕೆವಾರು ಉತ್ತರಗಳನ್ನು ನೀಡದೇ ಸತಾಯಿಸುವ ಪ್ರಕರಣಗಳು ಕಂಡುಬರುತ್ತಿದೆ. (ಉದಾ: ಟಿ.ಕೆ.ಶ್ರೀನಿವಾಸ್ ಪ್ರಕರಣ/ಸೂರ್ಯನಾರಾಯಣ ರಾವ್ ಪ್ರಕರಣ).

ವಿವಿಧ ನ್ಯಾಯಾಲಗಳಲ್ಲಿರುವ ಪ್ರಕರಣಗಳಲ್ಲಿ ಅಗತ್ಯ ಕ್ರಮ ಕೈಗೊಳ್ಳುವ ವಿಷಯದಲ್ಲಿ ಕಳೆದ ಒಂದು ವರ್ಷ ಆರು ತಿಂಗಳಲ್ಲಿ ಮಾನ್ಯ ವ್ಯವಸ್ಥಾಪಕ ನಿರ್ದೇಶಕರು ರವರು ಕಾಲ ಕಾಲಕ್ಕೆ ಸೂಕ್ತ ನಿರ್ದೇಶನಗಳನ್ನು ನೀಡುತ್ತಲೇ ಬಂದಿರುತ್ತಾರೆ ಹಾಗೂ ಸರ್ಕಾರದಿಂದಲೂ ಸಹ ಅನೇಕ ನೆನಪೋಲೆಗಳನ್ನು ಹಾಗೂ ನಿರ್ದೇಶನಗಳನ್ನು ನೀಡಲಾಗುತ್ತಿದೆ. ಆದರೂ ಸಹ, ರಾಜ್ಯದ ವಿವಿಧ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಇಂಜಿನಿಯರು (ವಿ)ಗಳು/ಮುಖ್ಯ ಇಂಜಿನಿಯರ್ (ವಿ), ವಿದ್ಯುತ್ ರವಾನೆ ಕೇಂದ್ರ/ಅಧೀಕ್ಷಕ ಇಂಜಿನಿಯರುಗಳು/ಕಾರ್ಯನಿರ್ವಾಹಕ ಇಂಜಿನಿಯರುಗಳು ಹಾಗೂ ಕೇಂದ್ರ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆರ್ಥಿಕ ಸಲಹೆಗಾರರು (ನಿಯಂತ್ರಣ ವ್ಯವಹಾರಗಳು)/ಆರ್ಥಿಕ ಸಲಹೆಗಾರರು (ಲೆಕ್ಕಗಳು ಮತ್ತು ಸಂಪನ್ಮೂಲ)/ ಕಂಪನಿ ಕಾರ್ಯದರ್ಶಿ/ ಮುಖ್ಯ ಇಂಜಿನಿಯರು (ವಿ) (ಯೋಜನೆಗಳು ಮತ್ತು ಸಮನ್ವಯ)/ಉಪ ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)/ ಪ್ರಧಾನ ವ್ಯವಸ್ಥಾಪಕರು (ಸಿಬ್ಬಂದಿ)/ ಸಹಾಯಕ ಪ್ರಧಾನ ವ್ಯವಸ್ಥಾಪಕರು (ಎ.ಪಿ.ಸಿ.ಸಿ) ರವರು ಹಾಗೂ ಸಮಾನಾಂತರ ಹುದ್ದೆಯ ಹಲವು ಅಧಿಕಾರಿಗಳು/ ಕಛೇರಿಗಳು ವಿವಿಧ ನ್ಯಾಯಾಲಯಗಳಲ್ಲಿ ಪ್ರಕರಣಗಳು ದಾಖಲಾಗಿದ್ದರೂ ಸಹ, ಇದುವರೆವಿಗೂ ಕೆಲವು ಪ್ರಕರಣಗಳಲ್ಲಿ ಆಕ್ಷೇಪಣೆಗಳ ಹೇಳಿಕೆಯನ್ನು ದಾಖಲಿಸಿಲ್ಲದಿರುವುದು ಮತ್ತು ಪ್ರಕರಣಗಳ ಇತ್ತೀಚಿನ ಪ್ರಗತಿಯನ್ನು ಪರಿಶೀಲಿಸಿ ನಿಗಮದ ಹಿತಾಸಕ್ತಿಗೆ ಅನುಗುಣವಾಗಿ ಅವಲೋಕಿಸುತ್ತಿರುವುದು ಕಂಡುಬರುತ್ತಿಲ್ಲ.

ಈ ಮೇಲಿನ ಎಲ್ಲಾ ಅಧಿಕಾರಿಗಳು ಮತ್ತು ಕಛೇರಿಗಳು ಸದರಿ ಪ್ರಕರಣಗಳನ್ನು ಕಾನೂನು ಶಾಖೆಗೆ ವರ್ಗಾವಣೆ ಮಾಡಿದ ನಂತರ, ಅವರುಗಳ ಜವಾಬ್ದಾರಿ ಮುಗಿಯಿತು

ಎಂಬಂತೆ ಕಾರ್ಯನಿರ್ವಹಿಸುತ್ತಿರುವುದು ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರ ಗಮನಕ್ಕೆ ಬಂದಿರುತ್ತದೆ. ಉದಾಹರಣೆಗೆ: ಇಂಡಿ ಭೂ ಸ್ವಾಧೀನ ಪ್ರಕರಣ/ ಚಿತ್ರದುರ್ಗ ಭೂ ಸ್ವಾಧೀನ ಪ್ರಕರಣ/ಶ್ರೀ ಲಕ್ಷ್ಮೀಪತಿ ನಾಯ್ಕರ್ ನ್ಯಾಯಾಂಗ ನಿಂದನೆ ಪ್ರಕರಣ/ ಎಸ್.ಪಿ.ಎಂ.ಎಲ್ ಪ್ರಕರಣ/ ಶಾಂತಾ ಪ್ರಾಜೆಕ್ಟ್ ಹಾಗೂ ಇನ್ನೂ ಹಲವಾರು ಪ್ರಕರಣಗಳಲ್ಲಿ ನ್ಯಾಯವಾದಿಗಳಿಂದ ಕೂಡಲೇ ಸರಿಯಾದ ರೀತಿಯಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸದಿರುವುದು ನಿಗಮದ ಗಮನಕ್ಕೆ ಬಂದಿರುತ್ತದೆ. ಮುಂದುವರೆದಂತೆ, ರಿಟ್ ಅರ್ಜಿಗಳಲ್ಲಿ ನಿಗಮದ ವಿರುದ್ಧ ಆದೇಶ ಬಂದಾಗ, ಅಂತಹ ಪ್ರಕರಣಗಳಲ್ಲಿ ಮೇಲ್ಮನವಿ ಸಲ್ಲಿಸುವ ಬಗ್ಗೆ ಕಾನೂನು ಶಾಖೆಗೆ ಕೂಡಲೇ ಪ್ರಸ್ತಾವನೆಗಳನ್ನು ಸಲ್ಲಿಸದಿರುವುದು ಕಂಡುಬಂದಿದೆ.

ಮಾನ್ಯ ನ್ಯಾಯಾಲಯದ ಆದೇಶ ಪಾಲಿಸುವಂತಹ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ನೀಡಿರುವ ಕಾಲಮಿತಿಯೊಳಗೆ ಅನುಷ್ಠಾನಗೊಳಿಸದೇ, ವಿಳಂಬ ಮಾಡುತ್ತಿರುವುದು ನಿಗಮದ ಗಮನಕ್ಕೆ ಬಂದಿದೆ.

ಈ ಮೇಲ್ಕಂಡ ವಿಷಯಗಳನ್ನು ನಿಗಮವು ಬಹಳ ಗಂಭೀರವಾಗಿ ಪರಿಗಣಿಸಿದ್ದು, ಈ ಹಿನ್ನೆಲೆಯಲ್ಲಿ ಕೆಳಗಿನಂತೆ ಆದೇಶವನ್ನು ಹೊರಡಿಸಿದೆ.

**ನಿಗಮ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ5/9659/2020-21**

**ಬೆಂಗಳೂರು, ದಿನಾಂಕ:** 24 DEC 2020

ಕರ್ನಾಟಕ ವಿದ್ಯುತ ಪ್ರಸರಣ ನಿಗಮ ನಿಯಮಿತದ ಎಲ್ಲಾ ಅಧಿಕಾರಿಗಳು ಇನ್ನು ಮುಂದೆ ಕಾನೂನು ಪ್ರಕರಣಗಳಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಕಾನೂನು ಶಾಖೆಯೊಂದಿಗೆ ಮತ್ತು ನ್ಯಾಯವಾದಿಗಳೊಂದಿಗೆ ಸಮಾಲೋಚಿಸಿ, ಅನಗತ್ಯ ವಿಳಂಬವಾಗದಂತೆ ಮೇಲ್ಮನವಿ ನಿಗದಿತ ಅವಧಿಯಲ್ಲಿ ಆಕ್ಷೇಪಣೆ ಸಲ್ಲಿಸಲು ಅನುಕೂಲವಾಗಲು ನಿಗಮದ ಪರವಾಗಿ ಅವಶ್ಯವಿರುವ ಅಗತ್ಯ ದಾಖಲೆಗಳನ್ನು/ಮಾಹಿತಿಗಳನ್ನು ಒದಗಿಸಿ, ಪ್ರಕರಣಗಳು ಶೀಘ್ರವಾಗಿ ಇತ್ಯರ್ಥವಾಗಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿದೆ. ಇಲ್ಲವಾದಲ್ಲಿ, ಸಂಬಂಧಿಸಿದ ಅಧಿಕಾರಿಗಳನ್ನು ವೈಯಕ್ತಿಕವಾಗಿ ಹೊಣೆಗಾರರನ್ನಾಗಿ ಮಾಡಿ ಅವರ ವಿರುದ್ಧ ಶಿಸ್ತು ಕ್ರಮವನ್ನು ಕೈಗೊಳ್ಳಲಾಗುವುದೆಂದು ಆದೇಶಿಸಿದೆ.

ನಿಗಮದ ಭೂಸ್ವಾಧೀನ ಪ್ರಕರಣಗಳಲ್ಲಿ ನ್ಯಾಯಾಲಯದ ಆದೇಶಗಳನ್ವಯ ಹೆಚ್ಚುವರಿ ಪರಿಹಾರವನ್ನು ಪಾವತಿಮಾಡುವ ಪ್ರಕ್ರಿಯೆಯಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸಲು ಅನುಸರಿಸಬೇಕಾದ ಕ್ರಮಗಳ ವಿಷಯದಲ್ಲಿ ನಿಗಮದ ಸುತ್ತೋಲೆ ಸಂಖ್ಯೆ: ಕವಿಪ್ರನಿನಿ/ಬಿ7/5841/92-93 ದಿನಾಂಕ: 18.07.2017 ರಲ್ಲಿ ಈಗಾಗಲೇ ಸೂಚಿಸಿರುವಂತೆ ಕ್ರಮಗಳನ್ನು ಜರುಗಿಸತಕ್ಕದ್ದು.

ಆದೇಶದ ಮೇರೆಗೆ,

'ವ್ಯವಸ್ಥಾಪಕ ನಿರ್ದೇಶಕರಿಂದ
ಅನುಮೋದಿಸಲ್ಪಟ್ಟಿದೆ'

**ನಿರ್ದೇಶಕರು(ಆಡಳಿತ ಮತ್ತು ಮಾ.ಸಂ),**
**ಕವಿಪ್ರನಿನಿ.**

__ಪ್ರತಿಗಳು ಮಾಹಿತಿಗಾಗಿ:__
1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್.

2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ / ಎಸ್ಕಾಂ.
4. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ / ಎಸ್ಕಾಂ.
5. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆ. ಮತ್ತು ಮಾ.ಸಂ.) ಕವಿಪ್ರನಿನಿ, ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ https://kptcl.karnataka.gov.in ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

6. ಎಲ್ಲಾ ಅಧೀಕ್ಷಕ ಇಂಜಿನಿಯರ್ / ನಿಯಂತ್ರಣಾಧಿಕಾರಿ, ಕವಿಪ್ರನಿನಿ/ ಎಸ್ಕಾಂ.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್ / ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
8. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ.), ಕವಿಪ್ರನಿನಿ, ಎಸ್ಕಾಂ.
9. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

**ಪ್ರತಿಗಳು ಮಾಹಿತಿಗಾಗಿ:**

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ ಮತ್ತು ನಿರ್ದೇಶಕರು, ಕವಿಪ್ರನಿನಿ/ ಎಸ್ಕಾಂಗಳು.
2. ಶ್ರೀ.ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜಿನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕ.ವಿ.ಪ್ರ.ನಿ.ನಿ./ಎಸ್ಕಾಂ ಪ.ಜಾ. /ಪ. ಪಂ.ಅಧಿಕಾರಿಗಳ ಸಂಘ, ಬೆಂಗಳೂರು.